ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ತೋಟಗಾರಿಕೆ ಬೆಳೆಗಳ ಕುರಿತು

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

153 (270) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆ ನಾಗಮಂಗಲ ಮತ್ತು ಪಾಂಡವಪುರ ವ್ಯಾಪ್ತಿಯಲ್ಲಿ ಅತಿ ಹೆಚ್ಚು ಹಣ್ಣು, ತರಕಾರಿ ಮತ್ತು ಹೂ ಬೆಳೆಯುವಂತಹ ತಾಲ್ಲೂಕುಗಳು ಯಾವುವು ; ಈ ತಾಲ್ಲೂಕುಗಳಲ್ಲಿ ಅಥವಾ ಹೋಬಳಿ ಕೇಂದ್ರಗಳಲ್ಲಿ ಕೋಲ್ಡ್ ಸ್ಟೋರೇಜ್ ಘಟಕ ಸ್ಥಾಪಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಬೆಳೆಯುವ ಹಣ್ಣು ಮತ್ತು ತರಕಾರಿಗಳನ್ನು ಸಂರಕ್ಷಿಸಲು ಕೋಲ್ಡ್ ಸ್ಟೋರೇಜ್ ಘಟಕ ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದೆ ಇದೆಯೇ ;

(ಇ) ಇದ್ದಲ್ಲಿ, ಮಂಡ್ಯ ಜಿಲ್ಲೆ ವ್ಯಾಪ್ತಿಯ ಯಾವ ಯಾವ ತಾಲ್ಲೂಕು ಕೇಂದ್ರಗಳಲ್ಲಿಈಘಟಕಗಳನ್ನುಸ್ಥಾಪಿಸಲುಸ್ಥಳಆಯ್ಕೆ ಮಾಡಲಾಗಿದೆ; ಘಟಕ ಸ್ಥಾಪನೆ ಮಾಡಲು ಮಂಜೂರಾಗಿರುವ ಅನುದಾನವೆಷ್ಟು ; ಮತ್ತು ಕಾಮಗಾರಿ ಯಾವ ಹಂತದಲ್ಲಿದೆ ?